**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.</u>**

**<u>ಸಿ.ಸಿ.ನಂ.427-2017</u>**

ಪಿ.ಡಬ್ಲ್ಯೂ:4

ಸಿ.ಡಬ್ಲ್ಯೂ:17

| | | |
|---|---|---|
| ಹೆಸರು | : | ಬಿ.ಸಿ.ಲಿಂಗಪ್ಪ |
| ತಂದೆಯ ಹೆಸರು | : | ಲೇಟ್ ಹೆಚ್ ಚಂದಪ್ಪ |
| ವಯಸ್ಸು | : | 67 ವರ್ಷ |
| ಉದ್ಯೋಗ | : | ನಿವೃತ್ತ ಪಿ ಎಸ್ ಐ |
| ವಾಸಸ್ಥಳ | : | ತರೀಕೆರೆ. |

**<u>ದಿನಾಂಕ.13-08-2021 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ.</u>**

<u>ಸಿಆರ್‌ಪಿಸಿ ಕಲಂ**.299** ರಡಿಯಲ್ಲಿ ಸಾಕ್ಷಿಯ ಹೇಳಿಕೆ**.**</u>

1. ದಿ:2-7-2012 ರಿಂದ ದಿ.10-07-2014 ರವರೆಗೆ ನಾನು ಅಜ್ಜಂಪುರ ಪೋಲೀಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿ:6-7-2013 ರಂದು ನಾನು ಠಾಣೆಯಲ್ಲಿ ಇದ್ದಾಗ ಈ ಕೇಸಿನ ಜಯಪ್ರಕಾಶ್‌ಭಟ್ (ಚಾಸಾ-1) ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ನಂ.141/2013 ರಲ್ಲಿ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಇಲಾಖಾ ಮೇಲಾಧಿಕಾರಿಯವರಿಗೆ ಪ್ರಥಮ ವರ್ತಮಾನ ವರದಿಯನ್ನು ನಿವೇಧಿಸಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿ ಮಧ್ಯಾಹ್ನ 14.30 ಗಂಟೆಗೆ ಬೇಟಿ ನೀಡಿ, ಸ್ಥಳಕ್ಕೆ ಪಂಚಾಯ್ತಿದಾರರಾದ ಚಾಸಾ-2 ಮತ್ತು 3 ರವರನ್ನು ಬರಮಾಡಿಕೊಂಡು, ಅವರುಗಳ ಸಮಕ್ಷಮ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತೇನೆ. ಸ್ಥಳ ಮಹಜರನ್ನು ಮಧ್ಯಾಹ್ನ 14.30 ರಿಂದ 15.30

ರವರೆವಿಗೆ ಜರುಗಿಸಿರುತ್ತೇನೆ. ಮಹಜರ ಕಾಲದಲ್ಲಿ ಕೃತ್ಯಕ್ಕೆ ಉಪಯೋಗಿಸಿದ ಬೀಗವನ್ನು ಪಂಚರ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತೇನೆ. ಈ ಪ್ರಕರಣದ ಸಾಕ್ಷಿದಾರರಾದ ಚಾಸಾ-9 ಹಾಗೂ 10 ರವರ ಹೇಳಿಕೆ ಪಡೆದಿರುತ್ತೇನೆ. ನಂತರ ಪ್ರಕರಣದ ಮುಂದಿನ ತನಿಖೆಯನ್ನು ಪಿ.ಎಸ್.ಐ ರವರಿಗೆ ವಹಿಸಿರುತ್ತೇನೆ.

3. ಸಾಕ್ಷಿ ನಿಪಿ-1 ದೂರಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ನಿಪಿ-3 ಸ್ಥಳ ಪಂಚನಾಮೆಯಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪ್ರ.ವ.ವರದಿಯನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಬೀಗವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಮು.ಮಾ-4 ಎಂದು ಗುರುತಿಸಲಾಗಿದೆ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾ.ದಂ. ರವರು, ತರೀಕೆರೆ.